# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 246 (294) |
| ಮಾನ್ಯ ಸದಸ್ಯರ ಹೆಸರು | ಶ್ರೀ ಕ. ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ), |
| ಉತ್ತರಿಸಬೇಕಾದ ದಿನಾಂಕ | 17/02/2022 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಾರ್ಮಿಕ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಉದ್ಯಮಗಳಾವುವು; ಇವುಗಳನ್ನು ಯಾವ ರೀತಿ ವರ್ಗೀಕರಿಸಲಾಗಿದೆ: (ಜಿಲ್ಲಾವಾರು ವಿವರವಾದ ಮಾಹಿತಿ ನೀಡುವುದು) | ಕಾರ್ಮಿಕ ಇಲಾಖೆಯಡಿ ಅನುಷ್ಠಾನಗೊಳಿಸುವ ವಿವಿಧ ಕಾರ್ಮಿಕ ಕಾಯ್ದೆಗಳ ವ್ಯಾಪ್ತಿಗೆ ಎಲ್ಲಾ ರೀತಿಯ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು ಕಂಪನಿಗಳು ಸೇರಿದಂತೆ ಖಾಸಗಿ ಕಾರ್ಖಾನೆಗಳು, ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳು, ಪ್ಲಾಂಟೇಷನ್‌ಗಳು, ಮೋಟಾರು ವಾಹನ ಸಂಸ್ಥೆಗಳು, ಕಟ್ಟಡ ನಿರ್ಮಾಣ ಸಂಸ್ಥೆಗಳು, ಬೀಡಿ ಮತ್ತು ಸಿಗಾರ್ ಉದ್ದಿಮೆ ಹಾಗೂ ಇತರೆ ಉದ್ದಿಮೆಗಳು ಬರುತ್ತವೆ.<br><br>ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳು, ಪ್ಲಾಂಟೇಷನ್‌ಗಳು, ಕಟ್ಟಡ ನಿರ್ಮಾಣ ಸಂಸ್ಥೆಗಳ ಜಿಲ್ಲಾವಾರು ಮಾಹಿತಿಯನ್ನು **ಅನುಬಂಧ-1** ರಲ್ಲಿ ಒದಗಿಸಿದೆ.<br>ಮೋಟಾರು ವಾಹನ ಸಂಸ್ಥೆಗಳು, ಬೀಡಿ ಮತ್ತು ಸಿಗಾರ್ ಉದ್ದಿಮೆಗಳ ಇಲಾಖೆಯ ವಿಭಾಗವಾರು ಮಾಹಿತಿ ಲಭ್ಯವಿದ್ದು, ಸದರಿ ಮಾಹಿತಿಯನ್ನು **ಅನುಬಂಧ-2** ರಲ್ಲಿ ಒದಗಿಸಿದೆ. |
| ಆ) | ಕಾರ್ಮಿಕರು ಅಂದರೆ ಯಾರು: ಕಾರ್ಮಿಕರಲ್ಲಿ ಎಷ್ಟು ವಿಧ: ಸಂಘಟಿತ ವಲಯ ಮತ್ತು ಅಸಂಘಟಿತ ವಲಯ ಎಂದರೇನು: ಇದರ ವ್ಯಾಪ್ತಿಯಲ್ಲಿ ಬರುವ ಉದ್ಯಮಗಳು ಯಾವುವು: (ವಿವರವಾದ ಮಾಹಿತಿ ನೀಡುವುದು) | **'ಕಾರ್ಮಿಕ'** ಎಂಬ ಪದದ ಅರ್ಥಕ್ಕೆ ಸಂಬಂಧಿಸಿದಂತೆ ವಿವಿಧ ಕಾರ್ಮಿಕ ಕಾಯ್ದೆಗಳಲ್ಲಿ **'ಕಾರ್ಮಿಕ'** ಎಂಬ ಪದದ ವ್ಯಾಖ್ಯಾನವಿರುತ್ತದೆ. ಕಾರ್ಮಿಕರಲ್ಲಿ ಸಂಘಟಿತ ಮತ್ತು ಅಸಂಘಟಿತ ಎಂಬ ಎರಡು ವಲಯಗಳಿದ್ದು, ಈ ಎರಡು ವಲಯಗಳೂ ಸೇರಿದಂತೆ ಕಾರ್ಮಿಕರಲ್ಲಿ ಅತಿಕುಶಲ, ಕುಶಲ, ಅರೆಕುಶಲ, ಹಾಗೂ ಅಕುಶಲ ಎಂಬ ವರ್ಗೀಕರಣ ಮಾಡಲಾಗಿರುತ್ತದೆ. ಸಂಘಟಿತ ಮತ್ತು ಅಸಂಘಟಿತ ವಲಯದ ವ್ಯಾಖ್ಯಾನ ಹಾಗೂ ಈ ವಲಯದಲ್ಲಿ ಬರುವ ಉದ್ಯಮಗಳ ಕುರಿತ ಮಾಹಿತಿ ಈ ಕೆಳ ಕಂಡಂತಿದೆ.<br><br>**ಸಂಘಟಿತ ವಲಯ**<br>ಸಂಘಟಿತ ವಲಯವು ಸಾಮಾಜಿಕ ಭದ್ರತಾ ಕಾಯ್ದೆಗಳಾದ ಪಿ.ಎಫ್ ಕಾಯ್ದೆ, ಇ.ಎಸ್.ಐ ಕಾಯ್ದೆ ಹಾಗೂ ಕನಿಷ್ಠ ವೇತನ ಕಾಯ್ದೆ, ಬೋನಸ್ ಪಾವತಿ ಕಾಯ್ದೆ, ಉಪಧನ ಪಾವತಿ ಕಾಯ್ದೆ ಇತ್ಯಾದಿ ಕಾರ್ಮಿಕ ಕಾಯ್ದೆಗಳ ವ್ಯಾಪ್ತಿಗೆ ಬರುವ ಕಾರ್ಮಿಕರನ್ನು ಹೊಂದಿದ ಸಂಸ್ಥೆಗಳನ್ನು ಒಳಗೊಳ್ಳುತ್ತದೆ. |

| | | |
|---|---|---|
| | | ಸಂಘಟಿತ ವಲಯದ ಕಾರ್ಮಿಕರು ಕೆಲಸ ನಿರ್ವಹಿಸುವ ಸಂಸ್ಥೆಗಳು ಕೇಂದ್ರ/ರಾಜ್ಯ ಸರ್ಕಾರದ ಇಲಾಖೆಗಳಾದ ಕಾರ್ಮಿಕ ಇಲಾಖೆ, ಇಎಸ್‌ಐ, ಭವಿಷ್ಯನಿಧಿ, ಕಾರ್ಖಾನೆಗಳು ಮತ್ತು ಬಾಯ್ಲರುಗಳ ಇಲಾಖೆಗಳಲ್ಲಿ ನೋಂದಾಯಿತವಾಗಿರುತ್ತದೆ ಹಾಗೂ ತಮ್ಮ ಕೆಲಸಕ್ಕೆ ಸಂಬಂಧಿಸಿದಂತೆ ನಿರ್ದಿಷ್ಟ ಸೇವಾ ನಿಯಮಗಳು ಹಾಗೂ ಷರತ್ತುಗಳು ಇರುತ್ತವೆ. ತಮ್ಮ ಬೇಡಿಕೆಗಳ ಈಡೇರಿಕೆಗಾಗಿ ಮಾಲೀಕರೊಡನೆ ನೊಂದಾಯಿತ ಕಾರ್ಮಿಕ ಸಂಘದಿಂದ Collective bargaining ಮಾಡಿ ವೇತನ ಹಾಗೂ ಇತರೆ ವಿಷಯಗಳಿಗೆ ಸಂಬಂಧಿಸಿದಂತೆ ಒಪ್ಪಂದಗಳನ್ನು ಮಾಡಿಕೊಳ್ಳಬಹುದಾಗಿರುತ್ತದೆ. ಇಂತಹ ವಲಯದ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುವ ಕಾರ್ಮಿಕರು ಅಸಂಘಟಿತ ವಲಯಕ್ಕೆ ಬರುತ್ತಾರೆ.<br><br>**ಅಸಂಘಟಿತ ವಲಯ**<br><br>ಅಸಂಘಟಿತ ವಲಯ ಎಂದರೆ ಮುಖ್ಯವಾಗಿ ಮಾಲೀಕ-ಕಾರ್ಮಿಕ ವ್ಯಾಖ್ಯಾನದ ಹೊರಗೆ ಉಳಿಯುತ್ತಾರೆ ಹಾಗೂ ಅವರಿಗೆ ಸೇವಾ ಭದ್ರತೆ ಮತ್ತು ಸಾಮಾಜಿಕ ಭದ್ರತಾ ಯೋಜನೆಗಳು ಸಾಮಾನ್ಯವಾಗಿ ಲಭಿಸುವುದಿಲ್ಲ.<br><br>ಕೇಂದ್ರ ಸರ್ಕಾರದ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಕಾಯ್ದೆ, 2008ರ ಕಲಂ 2(ಎಲ್)ರನ್ವಯ "ಅಸಂಘಟಿತ ವಲಯ", ಎಂದರೆ, ವ್ಯಕ್ತಿಗಳ ಅಥವಾ ಸ್ವಯಂ ನಿಯೋಜಿತ ಕೆಲಸಗಾರರ ಒಡೆತನದಲ್ಲಿರುವ ಹಾಗೂ ಉತ್ಪಾದನೆಯಲ್ಲಿ ಅಥವಾ ಸರಕುಗಳ ಮಾರಾಟದಲ್ಲಿ ನಿರತವಾಗಿರುವ ಅಥವಾ ಇತರ ಯಾವುದೇ ಬಗೆಯ ಸೇವೆಯನ್ನು ಒದಗಿಸುತ್ತಿರುವ ಮತ್ತು ಉದ್ಯಮವು ಕೆಲಸಗಾರರನ್ನು ನಿಯೋಜಿಸಿಕೊಂಡಿದ್ದರೆ, ಅಂಥ ಕೆಲಸಗಾರರ ಸಂಖ್ಯೆಯು 10 ಕ್ಕಿಂತ ಕಡಿಮೆ ಇರುವ ಒಂದು ಉದ್ದಿಮೆ.<br><br>ಪ್ರಸ್ತುತ ಸರ್ಕಾರವು ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯ ವತಿಯಿಂದ 43 ಅಸಂಘಟಿತ ವರ್ಗಗಳನ್ನು ಗುರುತಿಸಿದೆ. ಸದರಿ ಪ್ರತಿಯನ್ನು ಅನುಬಂಧ-3 ರಲ್ಲಿ ಒದಗಿಸಿದೆ. |
| ಇ) | ಅಂಬೇಡ್ಕರ್ ಸಹಾಯ ಹಸ್ತ ಯೋಜನೆ ಅಂದರೇನು: ಇದನ್ನು ಯಾವಾಗ ಆರಂಭಿಸಲಾಯಿತು: ಹಾಲಿ ಈ ಯೋಜನೆಯು ಜಾರಿಯಲ್ಲಿ ಇದೆಯೇ: (ವಿವರವಾದ ಮಾಹಿತಿ ನೀಡುವುದು) | "ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ" ಎಂಬ ಶೀರ್ಷಿಕೆಯಡಿ, ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ಹಾಗೂ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಗಳು ಅನುಷ್ಠಾನಗೊಳಿಸುತ್ತಿರುವ ಯೋಜನೆಗಳನ್ನು ಒಗ್ಗೂಡಿಸಿ ಒದಗಿಸಲು ರೂಪಿಸಿದ ಯೋಜನೆಯಾಗಿರುತ್ತದೆ. |

| | | |
|---|---|---|
| | | ಈ ಯೋಜನೆಯು 2017-18ನೇ ಆಯವ್ಯಯದಲ್ಲಿ ಘೋಷಣೆಯಾಗಿದ್ದು, ಪ್ರಸ್ತುತ ಜಾರಿಯಲ್ಲಿರುತ್ತದೆ.<br><br>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ನೀಡುವ ಸೌಲಭ್ಯದ ವಿವರವನ್ನು **ಅನುಬಂಧ-4** ರಲ್ಲಿ ಒದಗಿಸಿದೆ.<br><br>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯ ವತಿಯಿಂದ ಸದರಿ ಯೋಜನೆಯಡಿ ಪ್ರಸ್ತುತ 11 ವರ್ಗಗಳಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕರನ್ನು ನೋಂದಾಯಿಸಿ ಸ್ಮಾರ್ಟ್‌ಕಾರ್ಡ್ ನೀಡಲಾಗುತ್ತಿದ್ದು, ಸದರಿ ಯೋಜನೆ ಜಾರಿಯಲ್ಲಿರುತ್ತದೆ. |
| ಈ) | ಕಾರ್ಮಿಕ ಇಲಾಖೆಯಲ್ಲಿ ಇರುವ ಕಾರ್ಮಿಕ ನಿಧಿಯನ್ನು ಯಾವ ಯಾವ ಮೂಲಗಳಿಂದ ಸಂಗ್ರಹಿಸಲಾಗಿದೆ: ಹಾಲಿ ಲಭ್ಯವಿರುವ ಕಾರ್ಮಿಕ ನಿಧಿ ಎಷ್ಟು; | **ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:**<br>ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಸುಂಕ ಕಾಯ್ದೆ 1996ರಡಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಯನ್ನು ನಡೆಸುತ್ತಿರುವ ಮಾಲೀಕರು / ನಿಯೋಜಕರು ನಿರ್ಮಾಣ ವೆಚ್ಚದ ಮೇಲೆ ಶೇ.1 ರಷ್ಟು ಸುಂಕವನ್ನು ಪಾವತಿಸಬೇಕಾಗಿರುತ್ತದೆ. ಈ ಮೊತ್ತವನ್ನು ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕಾಯ್ದೆ 1996 ಹಾಗೂ ಕರ್ನಾಟಕ ನಿಯಮಗಳು, 2006 ರಡಿ ರಚಿಸಲಾಗಿರುವ ಈ ಮಂಡಳಿಯ ಸುಂಕ ನಿಧಿಗೆ ಜಮಾ ಮಾಡಲಾಗುತ್ತದೆ.<br>ಪ್ರಸ್ತುತ ಮಂಡಳಿಯ ಸುಂಕ ನಿಧಿಯಲ್ಲಿ ರೂ.7548.88 ಕೋಟಿ ಮೊತ್ತವು ಲಭ್ಯವಿರುತ್ತದೆ.<br><br>**ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:**<br>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಗೆ ರೂ.20:40 ರ ಅನುಪಾತದಲ್ಲಿ ವಂತಿಗೆ ಪಾವತಿಸುವ ಕಾರ್ಖಾನೆಗಳು, ಪ್ಲಾಂಟೇಷನ್‌ಗಳು, ಮೋಟಾರು ಸಂಸ್ಥೆಗಳು ಹಾಗೂ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳಲ್ಲಿ 50 ಕ್ಕಿಂತ ಹೆಚ್ಚು ಕಾರ್ಮಿಕರು ಕಾರ್ಯನಿರ್ವಹಿಸುತ್ತಿರುವ ಸಂಸ್ಥೆಗಳು ಮಂಡಳಿಗೆ ವಂತಿಗೆ ಪಾವತಿಸುತ್ತವೆ. ಮಂಡಳಿಯಲ್ಲಿ ಪ್ರಸ್ತುತ ಒಟ್ಟು ಮೊತ್ತ ರೂ. 135.36 ಕೋಟಿ ಕಾರ್ಮಿಕ ಕಲ್ಯಾಣ ನಿಧಿ ಇರುತ್ತದೆ. |

| | | |
|---|---|---|
| ಉ) | ಸದರಿ ಕಾರ್ಮಿಕ ನಿಧಿಯನ್ನು ಯಾವ ಯಾವ ಕಾರ್ಯಕ್ರಮಗಳಿಗೆ ಮಾತ್ರ ವಿನಿಯೋಗಿಸಬಹುದಾಗಿದೆ: ಇದರ ಸಂಬಂಧ ಮಾನ್ಯ ಸರ್ವೋಚ್ಚ ನ್ಯಾಯಾಲಯ ನೀಡಿರುವ ತೀರ್ಪಿನ ಮುಖ್ಯಾಂಶಗಳೇನು: | **ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:**<br>ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕಾಯ್ದೆ 1996 ರಡಿ ಕಲಂ 22 ರಲ್ಲಿ ನಿರೂಪಿಸಿರುವ ನಿರ್ದಿಷ್ಟ ಉದ್ದೇಶಗಳಿಗಾಗಿ ಈ ನಿಧಿಯಲ್ಲಿರುವ ಮೊತ್ತವನ್ನು ವಿನಿಯೋಗಿಸಬಹುದಾಗಿದೆ. ಸದರಿ ಕಾಯ್ದೆಯ ಕಲಂ 22 ಕ್ಕೆ ಅನುಗುಣವಾಗಿ ಮಂಡಳಿ ರೂಪಿಸಿರುವ ಯೋಜನೆಗಳ ವಿವರವನ್ನು **ಅನುಬಂಧ-4** ರಲ್ಲಿ ಒದಗಿಸಿದೆ.<br>ಈ ಸುಂಕ ನಿಧಿಯನ್ನು ವಿನಿಯೋಗಿಸುವ ಕುರಿತು ಮಾನ್ಯ ಸರ್ವೋಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ 318 /2006 ರಲ್ಲಿ ನೀಡಿರುವ ತೀರ್ಪಿನ ಅನ್ವಯ ಮಂಡಳಿಯ ಸುಂಕ ನಿಧಿಯಲ್ಲಿ ಸಂಗ್ರಹವಾಗಿರುವ ಮೊತ್ತವನ್ನು ಕಾಯ್ದೆಯ ಕಲಂ 22 ರಲ್ಲಿ ನಿರೂಪಿಸಿರುವ ನಿರ್ದಿಷ್ಟ ಉದ್ದೇಶಗಳಿಗೆ ಮಾತ್ರ ವಿನಿಯೋಗಿಸಲು ಅವಕಾಶವಿರುತ್ತದೆ.<br>**ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:**<br>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಗೆ ರೂ.20:40 ರ ಅನುಪಾತದಲ್ಲಿ ವಂತಿಗೆ ಪಾವತಿಸುವ ಸಂಘಟಿತ ಕಾರ್ಮಿಕರಿಗೆ ಮಂಡಳಿಯು ಈ ಕೆಳಕಂಡ ಕಲ್ಯಾಣ ಯೋಜನೆಗಳನ್ನು ಜಾರಿಗೊಳಿಸಿದೆ.<br>1) ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ.<br>2) ಕಾರ್ಮಿಕರಿಗೆ ವೈದ್ಯಕೀಯ ನೆರವು.<br>3) ಕಾರ್ಮಿಕರಿಗೆ ಅಪಘಾತ ಧನ ಸಹಾಯ.<br>4) ಮಹಿಳಾ ಕಾರ್ಮಿಕರಿಗೆ ಹೆರಿಗೆ ಭತ್ಯೆ ಸೌಲಭ್ಯ.<br>5) ಮೃತ ಕಾರ್ಮಿಕನ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ.<br>6) ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೊಳ್ಳುವ ಟ್ರೇಡ್ ಯೂನಿಯನ್/ಸಂಸ್ಥೆಗಳಿಗೆ ಧನಸಹಾಯ.<br>7) ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಧನಸಹಾಯ. |
| ಊ | ಈ ಇಲಾಖೆಯಡಿ ನೋಂದಾವಣೆಗೊಂಡಿರುವ ಸಂಘ-ಸಂಸ್ಥೆಗಳಾವುವು: ಇವುಗಳಿಗೆ ನೀಡಿರುವ ಅನುದಾನವೆಷ್ಟು? | ಕಾರ್ಮಿಕ ಇಲಾಖೆಯಲ್ಲಿ ಸಂಘ ಸಂಸ್ಥೆಗಳನ್ನು ನೋಂದಣಿ ಮಾಡಿ ಅನುದಾನವನ್ನು ಹಂಚುವ ಯೋಜನೆಗಳಿರುವುದಿಲ್ಲ.<br>ವೃತ್ತಿ ಸಂಘಗಳ ಕಾಯ್ದೆ 1926 (Trade Union Act 1926) ರನ್ವಯ ವೃತ್ತಿ ಸಂಘಗಳನ್ನು / ಕಾರ್ಮಿಕ ಸಂಘ (Trade Union Act 1926) ಗಳನ್ನು ನೋಂದಣಿ ಮಾಡುವ ಪ್ರಾವಧಾನಗಳಿರುತ್ತದೆ. ಈ ಕಾಯ್ದೆಯಡಿ ನೋಂದಣಿಯಾದ ಸಂಘಗಳಿಗೆ ಯಾವುದೇ ಅನುದಾನವನ್ನು ನೀಡಲಾಗುವುದಿಲ್ಲ. |

ಕಾಇ 66 ಎಲ್ಇಟ 2022

(ಅರಬೈಲ್ ಶಿವರಾಂ ಹೆಬ್ಬಾರ್)
ಕಾರ್ಮಿಕ ಸಚಿವರು

## ಅನುಬಂಧ-1

### ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಕೆ.ಟಿ ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 264 (294)

| ಕ್ರಮ ಸಂಖ್ಯೆ | ಜಿಲ್ಲೆ | ಅಂಗಡಿ ಮತ್ತು ವಾಣಿಜ್ಯ ಸಂಸ್ಥೆ ಸಂಖ್ಯೆ | ಪ್ಲಾಂಟೇಷನ್‌ಗಳ ಸಂಖ್ಯೆ | ಕಟ್ಟಡ ನಿರ್ಮಾಣ ಸಂಸ್ಥೆಗಳ ಸಂಖ್ಯೆ |
|---|---|---|---|---|
| 1 | 2 | 3 | 4 | 5 |
| 1 | ಬೆಂಗಳೂರು ನಗರ | 368028 | | 3,079 |
| 2 | ರಾಮನಗರ | 4395 | | 48 |
| 3 | ತುಮಕೂರು | 12880 | | 74 |
| 4 | ಚಿಕ್ಕಬಳ್ಳಾಪುರ | 5428 | | 64 |
| 5 | ಕೋಲಾರ | 7673 | | 141 |
| 6 | ಚಾಮರಾಜನಗರ | 2831 | | 52 |
| 7 | ಮಂಡ್ಯ | 6150 | | 60 |
| 8 | ಮೈಸೂರು | 21653 | | 250 |
| 9 | ಬಿಜಾಪುರ | 9886 | | 79 |
| 10 | ಬೆಳಗಾವಿ | 27371 | | 728 |
| 11 | ಬಾಗಲಕೋಟೆ | 12322 | | 51 |
| 12 | ಗದಗ | 6275 | | 22 |
| 13 | ಧಾರವಾಡ | 21267 | | 98 |
| 14 | ಹಾವೇರಿ | 6294 | | 21 |
| 15 | ಉತ್ತರ ಕನ್ನಡ | 17105 | | 33 |
| 16 | ಬಳ್ಳಾರಿ | 22990 | | 111 |
| 17 | ಚಿತ್ರದುರ್ಗ | 11843 | | 90 |
| 18 | ದಾವಣಗೆರೆ | 17410 | | 111 |
| 19 | ಬೀದರ್ | 7993 | | 13 |
| 20 | ಕಲಬುರಗಿ | 11054 | | 72 |
| 21 | ಕೊಪ್ಪಳ | 10666 | | 38 |
| 22 | ರಾಯಚೂರು | 9639 | | 110 |
| 23 | ಯಾದಗಿರಿ | 4678 | | 3 |
| 24 | ಚಿಕ್ಕಮಗಳೂರು | 5064 | 04 | 23 |
| 25 | ಹಾಸನ | 12230 | 229 | 80 |
| 26 | ಕೊಡಗು | 3286 | 07 | 19 |
| 27 | ದಕ್ಷಿಣ ಕನ್ನಡ | 16507 | | 177 |
| 28 | ಶಿವಮೊಗ್ಗ | 16450 | | 102 |
| 29 | ಉಡುಪಿ | 7639 | | 1203 |
| 30 | ಬೆಂಗಳೂರು ಗ್ರಾಮಾಂತರ | 11200 | | 6 |
| | ಒಟ್ಟು | **6,98,207** | **240** | **6,958** |

# ಅನುಬಂಧ-2

## ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಕೆ.ಟಿ ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 246 (294)

| ಕ್ರಮ ಸಂಖ್ಯೆ | ವಿಭಾಗ | ಮೋಟಾರು ವಾಹನ ಸಂಸ್ಥೆಗಳ ಕಾಯ್ದೆ | ಬೀಡಿ ಮತ್ತು ಸಿಗಾರ್ ಉದ್ದಿಮೆಗಳ ಸಂಖ್ಯೆ |
|---|---|---|---|
| 1 | 2 | 3 | 4 |
| 1 | ಬೆಂಗಳೂರು ವಿಭಾಗ-1 | 15 | 210 |
| 2 | ಬೆಂಗಳೂರು ವಿಭಾಗ-2 | 20 | 33 |
| 3 | ಬೆಂಗಳೂರು ವಿಭಾಗ-3 | 13 | 84 |
| 4 | ಬೆಂಗಳೂರು ವಿಭಾಗ-4 | 42 | 2 |
| 5 | ಮೈಸೂರು ವಿಭಾಗ | 87 | 193 |
| 6 | ಮಂಗಳೂರು ವಿಭಾಗ | 331 | 5671 |
| 7 | ಚಿಕ್ಕಮಗಳೂರು ವಿಭಾಗ | 24 | 0 |
| 8 | ಬೆಳಗಾವಿ ವಿಭಾಗ | 9 | 3 |
| 9 | ದಾರವಾಡ ವಿಭಾಗ | 22 | 185 |
| 10 | ಬಳ್ಳಾರಿ ವಿಭಾಗ | 14 | 218 |
| 11 | ಕಲ್ಬುರ್ಗಿ ವಿಭಾಗ | 2 | 1 |
|  | ಒಟ್ಟು | 579 | 6600 |

# ಅನುಬಂಧ–3

## ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 264 (294)

### ಸರ್ಕಾರ ಗುರುತಿಸಿರುವ 43 ಅಸಂಘಟಿತ ವರ್ಗದ ಕಾರ್ಮಿಕರ ಪಟ್ಟಿ

1. ದರ್ಜಿಗಳು
2. ದೋಬಿಗಳು
3. ಹಮಾಲಿಗಳು
4. ಹೋಟೆಲ್ ಕಾರ್ಮಿಕರು
5. ಆಟೋ ಮತ್ತು ಟ್ಯಾಕ್ಸಿ ಚಾಲಕರು ಹಾಗೂ ಖಾಸಗಿ ಬಸ್, ಲಾರಿ ಚಾಲಕರು ಹಾಗೂ ನಿರ್ವಾಹಕರು
6. ಆಟೋಮೊಬೈಲ್ ವರ್ಕ್‌ಶಾಪ್‌ಗಳಲ್ಲಿ ಕೆಲಸ ಮಾಡುವ ಕಾರ್ಮಿಕರು ಮತ್ತು
7. ಗೃಹ ಕಾರ್ಮಿಕರು
8. ಕೃಷಿ/ತೋಟಗಾರಿಕೆ/ಹೈನುಗಾರಿಕೆ ಕೆಲಸಗಳಲ್ಲಿ ತೊಡಗಿರುವ ಕೂಲಿ ಕಾರ್ಮಿಕರು
9. ನಾರಿನ ಉದ್ದಿಮೆಯಲ್ಲಿ ತೊಡಗಿರುವ ಕೂಲಿ ಕಾರ್ಮಿಕರು
10. ಮನೆಗಳಲ್ಲಿ ನೇಯ್ಗೆ ಕೆಲಸ ಮಾಡುವ ನೇಕಾರರು
11. ಮೀನುಗಾರರು
12. ಕುಂಬಾರರು
13. ಚಮ್ಮಾರರು
14. ಕ್ಷೌರಿಕರು
15. ಕಸಾಯಿ ಖಾನೆ ಕಾರ್ಮಿಕರು
16. ಕಮ್ಮಾರರು
17. ಚಿನಿವಾರರು/ಅಕ್ಕಸಾಲಿಗರು
18. ಮನೆಗಳಲ್ಲಿ ಬೀಡಿ ಕಟ್ಟುವವರು
19. ಮನೆಗಳಲ್ಲಿ ಅಗರಬತ್ತಿ ತಯಾರಿಸುವ ಕಾರ್ಮಿಕರು
20. ಶಿಲ್ಪಕಾರರು/ ಹಸ್ತ ಕುಶಲ ಕಾರ್ಮಿಕರು
21. ಚಿತ್ರ ಬಿಡಿಸುವವರು
22. ಬಿದಿರಿನ ವಸ್ತುಗಳನ್ನು ತಯಾರು ಮಾಡುವವರು
23. ಖಾದ್ಯ ತೈಲ/ಮನೆಯಲ್ಲಿ ಆಹಾರ ವಸ್ತುಗಳ ಸಂಸ್ಕರಣೆ ಕೆಲಸದಲ್ಲಿ ತೊಡಗಿರುವವರು.
24. ಟಿಂಬರ್ ಕೆಲಸದಲ್ಲಿ ತೊಡಗಿರುವ ಕಾರ್ಮಿಕರು
25. ರೇಷ್ಮೆ ಕಾರ್ಮಿಕರು
26. ಕಾಟನ್ ಜಿನ್ನಿಂಗ್ ಮತ್ತು ಪ್ರೊಸೆಸಿಂಗ್ ಕೆಲಸದಲ್ಲಿ ತೊಡಗಿರುವ ಕಾರ್ಮಿಕರು
27. ಮುದ್ರಣ ಕೆಲಸದಲ್ಲಿ ತೊಡಗಿರುವ ಕಾರ್ಮಿಕರು
28. ಕಲ್ಲು ಒಡೆಯುವ ಕಾರ್ಮಿಕರು
29. ಚರ್ಮ ಹದ ಮಾಡುವ ಕೆಲಸದಲ್ಲಿ ತೊಡಗಿರುವ ಕಾರ್ಮಿಕರು
30. ಎಲ್ಲಾ ವಿಧದ ಮಿಲ್‌ಗಳಲ್ಲಿ ಕೆಲಸ ಮಾಡುವ ಕಾರ್ಮಿಕರು
31. ಬೀದಿ ಬದಿಯ ಮಾರಟಗಾರರು
32. ಚಾಲಕರು/ನಿರ್ವಾಹಕರು/ಸಹಾಯಕರು/ ಕ್ಲೀನರ್‌ಗಳು/ ಗಾಡಿ ಎಳೆಯುವವರು/ ರಿಕ್ಷಾ ವಾಲಾಗಳು/ ಟಾಂಗಾವಾಲಾಗಳು.

33. ಎಲ್ಲಾ ಬಗೆಯ ರಿಪೇರಿ ಕೆಲಸ ಮತ್ತು ತ್ಯಾಜ್ಯ ವಿಲೇವಾರಿ ಕೆಲಸದಲ್ಲಿ ತೊಡಗಿರುವ ಕಾರ್ಮಿಕರು
34. ಚಿಂದಿ ಆಯುವವರು
35. ಅಡಿಗೆ ಕೆಲಸಗಾರರು/ಕಲ್ಯಾಣ ಮಂಟಪಗಳಲ್ಲಿ ಶುಚಿ ಕೆಲಸದಲ್ಲಿ ತೊಡಗಿರುವವರು/ಮಧ್ಯಾಹ್ನದ ಬಿಸಿ ಊಟದ ಕಾರ್ಮಿಕರು ಮತ್ತು ಸಹಾಯಕರು
36. ಸಫಾಯಿ ಕರ್ಮಚಾರಿಗಳು
37. ಕಛೇರಿಗಳಲ್ಲಿ ಶುಚಿ ಕೆಲಸದಲ್ಲಿ ತೊಡಗಿರುವ ಗುತ್ತಿಗೆ ಕಾರ್ಮಿಕರು
38. ಗುತ್ತಿಗೆ ಆಧಾರದ ಮೇಲೆ ನೇಮಕವಾಗಿರುವ ಭದ್ರತಾ ಸಿಬ್ಬಂದಿ/ವಾಚ್‌ಮೆನ್‌ಗಳು
39. ಪೋರ್ಟರ್
40. ಪ್ರವಾಸಿ ಗೈಡ್‌ಗಳು
41. ಮಂಡಕ್ಕಿ ಭಟ್ಟಿ ಕಾರ್ಮಿಕರು
42. ಛಾಯಾವೃತ್ತಿ ಕಾರ್ಮಿಕರು
43. ಇತರೆ ವರ್ಗ (ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಕಾಯ್ದೆ 2008ರ ಕಲಂ 2(ಟ) ಹಾಗೂ ಕಲಂ 2 (ಟ) ರ ವ್ಯಾಖ್ಯಾನಕ್ಕೆ ಒಳಪಡುವ ಅಸಂಘಟಿತ ವರ್ಗದ ಎಲ್ಲಾ ಕಾರ್ಮಿಕರು)

# ಅನುಬಂಧ-4

## ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 264 (294)

### ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ

### ಮಂಡಳಿಯ ವತಿಯಿಂದ ನೋಂದಾಯಿತ ಫಲಾನುಭವಿಗಳಿಗೆ ಮತ್ತು ಅವರ ಅವಲಂಬಿತರಿಗೆ ಸಿಗುವ ಸೌಲಭ್ಯಗಳು

1. ಪಿಂಚಣಿ ಸೌಲಭ್ಯ: ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ ರೂ.2,000/-
2. ಕುಟುಂಬ ಪಿಂಚಣಿ ಸೌಲಭ್ಯ: ಮೃತ ಪಿಂಚಣಿದಾರರ ಪತಿ / ಪತ್ನಿ ಮಾಸಿಕ ರೂ.1000/-
3. ದುರ್ಬಲತೆ ಪಿಂಚಣಿ: ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ/ಭಾಗಶಃ ಅಂಗವಿಕಲತೆ ಹೊಂದಿದ್ದರೆ ಮಾಸಿಕ ರೂ.2,000/- ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ ರೂ.2,00,000/- ದವರೆಗೆ ಅನುಗ್ರಹ ರಾಶಿ ಸಹಾಯಧನ.
4. ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ ಮರುಪಾವತಿ ಸೌಲಭ್ಯ ( ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
5. ಟ್ರೈನಿಂಗ್-ಕಮ್-ಟೂಲ್‌ಕಿಟ್ ಸೌಲಭ್ಯ (ಶ್ರಮ ಸಾಮರ್ಥ್ಯ) : ರೂ.30,000/- ವರೆಗೆ
6. ಶ್ರಮ ಸಂಸಾರ ಸಾಮರ್ಥ್ಯ ತರಬೇತಿ ಸೌಲಭ್ಯ: ನೋಂದಾಯಿತ ಫಲಾನುಭವಿಯ ಅವಲಂಭಿತರಿಗೆ ( ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
7. ವಸತಿ ಸೌಲಭ್ಯ (ಕಾರ್ಮಿಕ ಗೃಹ ಭಾಗ್ಯ): ರೂ.2,00,000/- ದವರೆಗೆ ಮುಂಗಡ ಸೌಲಭ್ಯ
8. ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀ ಬಾಂಡ್): ಮಹಿಳಾ ಫಲಾನುಭವಿಯ ಮೊದಲ ಎರಡು ಮಕ್ಕಳಿಗೆ ಹೆಣ್ಣು ಮಗುವಿನ ಜನನಕ್ಕೆ ರೂ. 30,000/- ಮತ್ತು ಗಂಡು ಮಗುವಿನ ಜನನಕ್ಕೆ ರೂ.20,000/-
9. ಶಿಶು ಪಾಲನಾ ಸೌಲಭ್ಯ:
10. ಅಂತ್ಯಕ್ರಿಯೆ ವೆಚ್ಚ : ರೂ.4,000/- ಹಾಗೂ ಅನುಗ್ರಹ ರಾಶಿ ರೂ.50,000/-ಸಹಾಯಧನ
11. ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ): ಫಲಾನುಭವಿಯ ಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:

| ಕ್ರಸಂ | ತರಗತಿ (ಉತ್ತೀರ್ಣಕ್ಕೆ) | |
|---|---|---|
| 1 | ಕೆಜಿ/ ಪೂರ್ವ ಶಾಲೆ /ನರ್ಸರಿ (ವರ್ಷ 3 ರಿಂದ 5) | 5,000 |
| 2 | 1 ರಿಂದ 4ನೇ ತರಗತಿ | 5,000 |
| 3 | 5 ರಿಂದ 8ನೇ ತರಗತಿ | 8,000 |
| 4 | 9 ಹಾಗೂ 10ನೇ ತರಗತಿ | 12,000 |
| | ಪದವಿ ಪೂರ್ವ | |
| 5 | ಪ್ರಥಮ ಪಿಯುಸಿ ಮತ್ತು ದ್ವಿತೀಯ ಪಿ.ಯು.ಸಿ | 15,000 |
| 6 | ಪಾಲಿಟೆಕ್ನಿಕ್ / ಡಿಪ್ಲಮಾ/ ಐಟಿಐ | 20,000 |
| 7 | ಬಿಎಸ್‌ಸಿ ನರ್ಸಿಂಗ್/ ಜಿಎನ್‌ಎಮ್/ ಎಎನ್‌ಎಮ್/ ಪಾರಮೆಡಿಕಲ್ ಕೋರ್ಸ್ | 40,000 |
| 8 | ಡಿ.ಎಡ್ | 25,000 |

| | | |
|---|---|---|
| | ಬಿ.ಎಡ್ | **35,000** |
| 9 | ಪದವಿ ಪ್ರತಿ ವರ್ಷಕ್ಕೆ (ಯಾವುದೇ ಪದವಿ) | **25,000** |
| 10 | ಎಲ್‌ಎಲ್‌ಬಿ / ಎಲ್‌ಎಲ್‌ಎಮ್ | **30,000** |
| 11 | ಸ್ನಾತಕೋತ್ತರ ಪದವಿ ಸೇರ್ಪಡೆಗೆ | **35,000 ಗರಿಷ್ಠ**<br>**2 ವರ್ಷ ಅವಧಿಗೆ ಒಳಪಟ್ಟು** |
| **ತಾಂತ್ರೀಕ/ ವೈದ್ಯಕೀಯ ಎನ್‌ಇಇಟಿ ಅಥವಾ ಕೆಸಿಇಟಿ** | | |
| 12 | ಬಿಇ / ಬಿ.ಟೆಕ್ ಅಥವಾ ಸಂಬಂಧಪಟ್ಟ ಯೂಜಿ ಕೋರ್ಸ್ | **ಸದರಿ**<br>**ಕೋರ್ಸ್‌ನ ಗರಿಷ್ಠ**<br>**2 ವರ್ಷ ಅವಧಿಗೆ ಒಳಪಟ್ಟು**<br>**ವಾರ್ಷಿಕ ರೂ.50,000** |
| 13 | ಎಮ್.ಟೆಕ್/ ಎಮ್ ಇ ( ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕ್ಕೋತ್ತರ ಕೋರ್ಸ್) | **ಸದರಿ**<br>**ಕೋರ್ಸ್‌ನ ಗರಿಷ್ಠ**<br>**ಅವಧಿಗೆ ಒಳಪಟ್ಟು**<br>**ವಾರ್ಷಿಕ ರೂ. 60,000** |
| 14 | ವೈದ್ಯಕೀಯ (ಎಮ್‌ಬಿಬಿಎಸ್ /ಬಿಎಎಮ್‌ಎಸ್ / ಬಿಡಿಎಸ್ /ಬಿಹೆಚ್‌ಎಮ್‌ಎಸ್ ಕೋರ್ಸ್‌ಗೆ ಅಥವಾ ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕ್ಕೋತ್ತರ ಕೋರ್ಸ್ | **ರೂ.60,000**<br>(ಸದರಿ<br>ಕೋರ್ಸ್‌ನ ಗರಿಷ್ಠ<br>ಅವಧಿಗೆ ಒಳಪಟ್ಟು ) |
| | ಎಮ್‌ಡಿ | **ರೂ. 75,000 (ಸದರಿ**<br>**ಕೋರ್ಸ್‌ನ ಗರಿಷ್ಠ**<br>**ಅವಧಿಗೆ ಒಳಪಟ್ಟು)** |
| 15 | ಪಿಹೆಚ್‌ಡಿ / ಎಮ್. ಫಿಲ್ (ಯಾವುದೇ ವಿಷಯ) | ಪಿಹೆಚ್‌ಡಿಗೆ ಗರಿಷ್ಠ<br>ಮೂರು ವರ್ಷಗಳಿಗೆ ಹಾಗೂ<br>ಎಮ್‌ಫಿಲ್‌ಗೆ 1 ವರ್ಷಕ್ಕೆ<br>ಪ್ರತಿ ವರ್ಷ<br>**ರೂ. 25,000 (ಯೂಜಿಸಿಯ**<br>**ಜೂನಿಯರ್ ರಿಸರ್ಚ್ ಪೆಲೋಶಿಫ್‌ಗೆ**<br>**ಆಯ್ಕೆಯಾಗಿರುವ ಅಭ್ಯರ್ಥಿಗಳು ಹಾಗೂ**<br>**ಮತ್ತು**<br>**ರಾಜ್ಯ ಸರ್ಕಾರದಲ್ಲಿ ಕೆಲಸ**<br>**ನಿರ್ವಹಿಸುತ್ತಿರುವ ಅಭ್ಯರ್ಥಿಗಳು ಹಾಗೂ**<br>**ಯೂಜಿಸಿ ನಿಯಮಗಳನ್ವಯ ವೇತನ**<br>**ಅನುದಾನಕ್ಕೆ ಒಳಪಡುವ ಹುದ್ದೆಗಳಲ್ಲಿ**<br>**ಅನುದಾನಿತ**<br>**ಕಾಲೇಜುಗಳಲ್ಲಿ ಕೆಲಸ**<br>**ನಿರ್ವಹಿಸುತ್ತಿರುವ ಅಭ್ಯರ್ಥಿಗಳು**<br>**ಈ ಸೌಲಭ್ಯವನ್ನು ಪಡೆಯಲು**<br>**ಅರ್ಹರಿರುವುದಿಲ್ಲ.** |
| 16 | ಐಐಟಿ/ಐಐಐಟಿ/ ಐಐಎಮ್/ ಎನ್‌ಐಟಿ/ ಐಐಎಸ್‌ಇಆರ್/ ಎಐಐಎಮ್‌ಎಸ್ /ಎನ್‌ಎಲ್‌ಯೂ ಮತ್ತು ಭಾರತ ಸರ್ಕಾರದ ಮಾನ್ಯತೆ ಪಡೆದ ಕೋರ್ಸ್‌ಗಳು | **ಪಾವತಿಸಿದ ಬೋದನಾ ಶುಲ್ಕ** |

12. ವೈದ್ಯಕೀಯ ಸಹಾಯಧನ (ಕಾರ್ಮಿಕ ಆರೋಗ್ಯ ಭಾಗ್ಯ): ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ ರೂ.300/- ರಿಂದ ರೂ.10,000/-ವರೆಗೆ
13. ಅಪಘಾತ ಪರಿಹಾರ: ಮರಣ ಹೊಂದಿದ್ದಲ್ಲಿ ರೂ.5,00,000/-, ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ ರೂ.2,00,000/- ಮತ್ತು ಭಾಗಶಃ ಶಾಶ್ವತ ದುರ್ಬಲತೆಯಾದಲ್ಲಿ ರೂ.1,00,000/-
14. ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ): ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಶಸ್ತ್ರಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮ ಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರ ಪಿಂಡದಲ್ಲಿನ ಕಲ್ಲು ತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ, ಕಿಡ್ನಿ ಶಸ್ತ್ರಚಿಕಿತ್ಸೆ, ಇ.ಎನ್.ಟಿ. ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕ್ಯುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆ ಮುರಿತ/ಡಿಸ್‌ಲೊಕೇಶನ್ ಚಿಕಿತ್ಸೆ, ಇತರೆ ಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ ರೂ.2,00,000/-ವರೆಗೆ
15. ಮದುವೆ ಸಹಾಯಧನ (ಗೃಹ ಲಕ್ಷ್ಮೀ ಬಾಂಡ್): ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ ತಲಾ ರೂ.50,000/-
16. ಫಲಾನುಭವಿಯ ಮಕ್ಕಳು ಯುಪಿಎಸ್‌ಸಿ, ಕೆಪಿಎಸ್‌ಸಿ ಹುದ್ದೆಗಳಿಗಾಗಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ಪ್ರತಿಷ್ಠಿತ ಸಂಸ್ಥೆಗಳಿಂದ ತರಬೇತಿ ಮತ್ತು ಅವರ ಮಕ್ಕಳು ಹೊರದೇಶಗಳಲ್ಲಿ ಉನ್ನತ ವ್ಯಾಸಂಗ ಮಾಡಲು ತಗಲುವ ವೆಚ್ಚವನ್ನು ಮಂಡಳಿವತಿಯಿಂದ ಭರಿಸಲಾಗುವುದು.
17. ಬಿಎಂಟಿಸಿ ಬಸ್ ಪಾಸ್ ಸೌಲಭ್ಯ: ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೆಲಸ ಮಾಡುತ್ತಿರುವಂತಹ / ವಾಸಸ್ಥಳದಿಂದ ಬೆಂಗಳೂರಿಗೆ ಪ್ರಯಾಣಿಸುವ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ
18. ಕೆಎಸ್‌ಆರ್‌ಟಿಸಿ ಬಸ್ ಪಾಸ್‌ನ ಸೌಲಭ್ಯ: ರಾಜ್ಯದಾದ್ಯಂತ ವಿದ್ಯಾಭ್ಯಾಸದಲ್ಲಿ ತೊಡಗಿರುವ ನೋಂದಾಯಿತ ಕಾರ್ಮಿಕರ ಇಬ್ಬರು ಮಕ್ಕಳಿಗೆ (ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
19. ತಾಯಿ ಮಗು ಸಹಾಯ ಹಸ್ತ: ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವ ಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ ರೂ.6,000/- ಗಳ ಸಹಾಯಧನ.